**All India Radio: Bangalore**
**Regional Bulletin In Kannada**
**06.05.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಸ್ಥಳೀಯ ಸಂಸ್ಥೆಗಳ ಚುನಾವಣೆ ಶೀಘ್ರದಲ್ಲೇ ನಡೆಸಲು ಸರ್ಕಾರ ಸಿದ್ಧ ; ಮುಖ್ಯಮಂತ್ರಿ ಸಿದ್ದರಾಮಯ್ಯ
2. ಕೇಂದ್ರ ಸಚಿವ ಸಂಪುಟ ನಿರ್ಧಾರದಿಂದ ರಾಜ್ಯದ ೮ ರಿಂದ ೧೦ ಲಕ್ಷ ಕಬ್ಬು ಬೆಳೆಗಾರರಿಗೆ ಪ್ರಯೋಜನ - ಸಚಿವ ಪ್ರಲ್ಹಾದ್ ಜೋಶಿ
3. ಶೃಂಗೇರಿ ಮತಕ್ಷೇತ್ರದಿಂದ ಆಯ್ಕೆಯಾಗಿರುವ ಡಿ.ಎನ್.ಜೀವರಾಜ ವಿಧಾನಸಭಾ ಸದಸ್ಯರಾಗಿ ಇಂದು ಪ್ರಮಾಣ ವಚನ ಸ್ವೀಕಾರ
4. ಬೆಂಗಳೂರಿನಲ್ಲಿ ನಾಡಿದ್ದಿನಿಂದ ರಾಜ್ಯಮಟ್ಟದ ಮಾವು-ಹಲಸು ಮೇಳ
5. ಐಟಿಎಫ್‌ಡಬ್ಲ್ಯು ೩೫ ತುಮಕೂರು ಓಪನ್ ಟೆನಿಸ್ ಟೂರ್ನಿ : ಸಿಂಗಲ್ಸ್-ಡಬಲ್ಸ್ ಎರಡರಲ್ಲೂ ಭಾರತೀಯ ಆಟಗಾರ್ತಿಯರ ಮುನ್ನಡೆ

<><><><>

ರಾಜ್ಯದಲ್ಲಿ ಬಾಕಿ ಇರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ವಿಳಂಬ ಮಾಡದೆ ಶೀಘ್ರದಲ್ಲೇ ನಡೆಸಲು ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಇಂದು ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು. ಮುಖ್ಯಮಂತ್ರಿ ಸ್ಥಾನದ ಬದಲಾವಣೆ ಕುರಿತ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಹೈಕಮಾಂಡ್ ತೆಗೆದುಕೊಳ್ಳುವ ಯಾವುದೇ ನಿರ್ಧಾರಕ್ಕೆ ತಾವು ಬದ್ಧವಾಗಿರುವುದಾಗಿ ಸ್ಪಷ್ಟಪಡಿಸಿದರು. ಎಐಸಿಸಿ ನಾಯಕ ರಾಹುಲ್ ಗಾಂಧಿ ಅವರ ಭೇಟಿಗೆ ಸಮಯ ನಿಗದಿಯಾದ ತಕ್ಷಣ ದೆಹಲಿಗೆ ತೆರಳಿ ರಾಜ್ಯದ ಪ್ರಮುಖ ವಿಷಯಗಳ ಕುರಿತು ಚರ್ಚಿಸುವುದಾಗಿ ಸಿದ್ದರಾಮಯ್ಯ ಈ ಸಂದರ್ಭದಲ್ಲಿ ತಿಳಿಸಿದರು. ರಾಜ್ಯದ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷದ ಗೆಲುವು ಸರ್ಕಾರದ ಜನಪರ ಗ್ಯಾರಂಟಿ ಯೋಜನೆಗಳಿಗೆ ಜನಸಾಮಾನ್ಯರು ನೀಡಿದ ಅಭಯಹಸ್ತವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು. ಶೃಂಗೇರಿ ವಿಧಾನಸಭಾ ಕ್ಷೇತ್ರದ ಚುನಾವಣಾ ಫಲಿತಾಂಶದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು, ಇದರ ವಿರುದ್ಧ ನ್ಯಾಯಾಲಯದ ಮೊರೆ ಹೋಗುವುದಾಗಿ ತಿಳಿಸಿದರು.

<><><><>

ರಾಜ್ಯದ ಸೂರ್ಯಕಾಂತಿ ಬೆಳೆಗಾರರ ಬೆಂಬಲಕ್ಕೆ ನಿಂತ ಬೆನ್ನಲ್ಲೇ ಕೇಂದ್ರ ಸರ್ಕಾರ ಇದೀಗ ಕಬ್ಬು ಬೆಳೆಗಾರರಿಗೂ ಬೆಂಬಲ ಬೆಲೆ ಹೆಚ್ಚಿಸಿ ನೆರವಿಗೆ ಬಂದಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಕೇಂದ್ರ ಸಚಿವ ಸಂಪುಟ ೨೦೨೬-೨೭ನೇ ಹಂಗಾಮಿಗೆ ಕಬ್ಬಿಗೆ ಶೇಕಡ ೧೦.೨೫ ಮೂಲ ರಿಕವರಿ ದರದ ಮೇಲೆ ಪ್ರತಿ ಕ್ವಿಂಟಲ್‌ಗೆ ೩೬೫ ರೂಪಾಯಿ ನ್ಯಾಯೋಚಿತ ಮತ್ತು ಲಾಭದಾಯಕ ಬೆಲೆಯನ್ನು ಅನುಮೋದಿಸಿದೆ. ಇದರಿಂದ ರಾಜ್ಯದ ಸರಿ ಸುಮಾರು ೮ ರಿಂದ ೧೦ ಲಕ್ಷ ರೈತರಿಗೆ ಪ್ರಯೋಜನವಾಗಲಿದೆ ಎಂದು ಸಚಿವರು ಹೇಳಿದ್ದಾರೆ. ಕಬ್ಬಿನ ರಿಕವರಿಯಲ್ಲಿ ಶೇಕಡ ೦.೧೦ ಏರಿಕೆಗೆ ರೂಪಾಯಿ ೩.೫೬, ಪ್ರತಿಕ್ವಿಂಟಲ್ ಹೆಚ್ಚುವರಿ ಪ್ರೋತ್ಸಾಹ ಧನ ನೀಡುವುದರ ಜೊತೆಗೆ ರಿಕವರಿ ಶೇಕಡ ೯.೫ ಅಥವಾ ಅದಕ್ಕಿಂತ ಕಡಿಮೆಯಿದ್ದರೂ ಯಾವುದೇ ಕಡಿತವಿಲ್ಲದೇ ರೂಪಾಯಿ ೩೩೮.೩ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಕೇಂದ್ರದ ಈ ನಿರ್ಣಯ ಕಬ್ಬು ಬೆಳೆಗಾರರು ಮಾತ್ರವಲ್ಲದೆ, ಸಕ್ಕರೆ ಕಾರ್ಖಾನೆಗಳು ಹಾಗೂ ಸಕ್ಕರೆ ಉದ್ಯಮದ ೫ ಲಕ್ಷಕ್ಕೂ ಅಧಿಕ ಕಾರ್ಮಿಕರಿಗೂ ನೆರವಾಗಲಿದೆ. ಕಬ್ಬಿನ ಎಫ್‌ಆರ್‌ಪಿ ಹೆಚ್ಚಳ ಮೂಲಕ ಸಮಸ್ತ ಸಕ್ಕರೆ ಉದ್ಯಮ ಮತ್ತು ಕೃಷಿ ಕ್ಷೇತ್ರವನ್ನು ಮತ್ತಷ್ಟು ಸಶಕ್ತಗೊಳಿಸುವಲ್ಲಿ ಪ್ರಧಾನಿ ಮೋದಿ ಬದ್ಧತೆ ತೋರಿದ್ದಾರೆಂದು ಸಚಿವ ಜೋಶಿ ಪ್ರತಿಪಾದಿಸಿದ್ದಾರೆ. ರಾಜ್ಯದ ಬೆಳಗಾವಿ, ಬಾಗಲಕೋಟೆ, ಮಂಡ್ಯ, ಮೈಸೂರು, ವಿಜಯಪುರ ಮತ್ತು ಬಳ್ಳಾರಿ, ದಾವಣಗೆರೆ, ಬೀದರ್ ಹೀಗೆ ವಿವಿಧ ಜಿಲ್ಲೆಗಳು ಕಬ್ಬು ಬೆಳೆಯುವಲ್ಲಿ ಮುಂಚೂಣಿಯಲ್ಲಿದ್ದು, ದೇಶದ ಒಟ್ಟು ಸಕ್ಕರೆ ಉತ್ಪಾದನೆಯಲ್ಲಿ ಶೇಕಡ ೧೯ರಷ್ಟು ರಾಜ್ಯದ ಪಾಲಿದೆ.  ಹೀಗಾಗಿ ಈ ಎಫ್‌ಆರ್‌ಪಿ ಹೆಚ್ಚಳವು ರಾಜ್ಯದ ಪಾಲಿಗೂ ಅನನ್ಯ ಕೊಡುಗೆಯಾಗಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

<><><><>

ಬೆಂಗಳೂರಿನ ಕಬ್ಬನ್ ಉದ್ಯಾನವನದಲ್ಲಿ ಇದೇ ಶುಕ್ರವಾರದಿಂದ ರಾಜ್ಯಮಟ್ಟದ ಮಾವು ಮತ್ತು ಹಲಸು ಪ್ರದರ್ಶನ ಮಾರಾಟ ಮೇಳವನ್ನು ಆಯೋಜಿಸಲಾಗಿದೆ. ಮಾವು ಮತ್ತು ಹಲಸು ಮೇಳ - ಪ್ರದರ್ಶನವನ್ನು ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮದ ಅಧ್ಯಕ್ಷ ಡಾ.ಬಿ.ಸಿ.ಮುದ್ದು ಗಂಗಾಧರ್ ಉದ್ಘಾಟಿಸಲಿದ್ದಾರೆ. ತೋಟಗಾರಿಕೆ ಇಲಾಖೆ ಹಾಗೂ ರಾಜ್ಯ ಮಾವು ಅಭಿವೃದ್ಧಿ ಹಾಗೂ ಮಾರುಕಟ್ಟೆ ನಿಗಮ ಸಂಯುಕ್ತಾಶ್ರಯದಲ್ಲಿ ಈ ತಿಂಗಳ ೧೭ರವರೆಗೆ ಮೇಳ ನಡೆಯಲಿದೆ. ಗ್ರಾಹಕರಿಗೆ ಸಹಜವಾಗಿ ಮಾಗಿದ ಹಣ್ಣುಗಳನ್ನು ರೈತರಿಂದ ನೇರವಾಗಿ ಒದಗಿಸುವುದು. ಬೆಳೆಗಾರರು ಮತ್ತು ಗ್ರಾಹಕರ ನಡುವೆ ನೇರ ಸಂಪರ್ಕ ಕಲ್ಪಿಸಿ, ಬೆಳೆಗಾರರಿಗೆ ಯೋಗ್ಯಬೆಲೆ ಹಾಗೂ ಗ್ರಾಹಕರಿಗೆ ತಾಜಾ ಹಣ್ಣು ಸೂಕ್ತ ಬೆಲೆಗೆ ದೊರಕುವಂತೆ ಮಾಡುವುದು ಈ ಪ್ರದರ್ಶನದ ಉದ್ದೇಶವಾಗಿದೆ.

ಹತ್ತು ದಿನಗಳ ಕಾಲ ನಡೆಯಲಿರುವ ಈ ಮೇಳದಲ್ಲಿ ಬಾದಾಮಿ, ಮಲ್ಲಿಕಾ, ಸಿಂಧೂರಾ, ರಸಪುರಿ, ಕರಿ ಇಶಾಡ್, ಚಾಲ್ತಿ, ಮಾವಿನ ತಳಿಗಳು ಹಾಗೂ ರುದ್ರಾಕ್ಷಿ, ಶಿವರಾತ್ರಿ, ಏಕಾದಶಿ, ತುಬಗೆರೆ ಮತ್ತು ಲಾಲ್‌ಬಾಗ್ ಮಧುರ ಹಣ್ಣುಗಳು ಖರೀದಿಗೆ ಲಭ್ಯ ಇರುತ್ತದೆ. ರಾಮನಗರ, ಮಂಡ್ಯ, ತುಮಕೂರು ಮತ್ತು ಉತ್ತರಕನ್ನಡ ಜಿಲ್ಲೆಗಳ ಮಾವು ಹಾಗೂ ಹಲಸು ಬೆಳೆಗಾರರು ಈ ಮೇಳದಲ್ಲಿ ಮಳಿಗೆಗಳ ಮೂಲಕ ಪಾಲ್ಗೊಳ್ಳಲಿದ್ದಾರೆ.  ಒಟ್ಟು ೫೭ ಮಳಿಗೆಗಳ ಮೂಲಕ ಹಣ್ಣು ಪ್ರದರ್ಶನ ಹಾಗೂ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ. ಜಿಐ ಪಡೆದಿರುವ ಕರಿ ಇಶಾಡು ಮಾವು ಹಾಗೂ ಮಿಡಿ ಉಪ್ಪಿನಕಾಯಿ ತಳಿಗಳು ಕೂಡ ಮಾರಾಟಕ್ಕೆ ಲಭ್ಯವಿದೆ ಎಂದು ಅಧಿಕೃತವಾಗಿ ತಿಳಿಸಲಾಗಿದೆ.

<><><><>

ಮೈಸೂರಿನ ಸಿದ್ದಿಕಿ ನಗರ, ಮಣಿಪಾಲ್ ಆಸ್ಪತ್ರೆ ವೃತ್ತದ ಬಳಿ ರಾಷ್ಟ್ರೀಯ ಹೆದ್ದಾರಿ ೨೭೫ರಲ್ಲಿ ನಿರ್ಮಿಸಲು ಉದ್ದೇಶಿಸಲಾಗಿರುವ ಮೇಲ್ಸೇತುವೆ ಸ್ಥಳಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ಇಂದು ಭೇಟಿ ನೀಡಿ ವೀಕ್ಷಿಸಿದರು. ಮೇಲ್ಸೇತುವೆ ಕಾಮಗಾರಿಗೆ  ಒಟ್ಟು ೩೪೭ ಮರಗಳು ಅಡ್ಡಿಯಾಗಿವೆ ಎಂದು ಅಂದಾಜಿಸಲಾಗಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದರು. ಬೀಟೆ, ರೈನ್ ಟ್ರೀ, ಹೊಂಗೆ, ಆಕಾಶ ಮಲ್ಲಿಗೆ, ಗಸಗಸೆ, ಮಹಾಗನಿ, ಮಾವು, ಬೇವು ಸೇರಿದಂತೆ ವಿವಿಧ ಮರಗಳನ್ನು ಕಾಮಗಾರಿಗಾಗಿ ತೆಗೆಯಬೇಕಾಗುತ್ತದೆ. ಹೀಗಾಗಿ ಎಷ್ಟು ಮರಗಳನ್ನು ಉಳಿಸಬಹುದು, ಬೀಟೆ, ಇತ್ಯಾದಿ ಮರಗಳನ್ನು ಸ್ಥಳಾಂತರಿಸಲು ಸಾಧ್ಯವೇ ಎಂಬ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸುವಂತೆ ಸಚಿವರು ಅರಣ್ಯಾಧಿಕಾರಿಗಳಿಗೆ ಸೂಚಿಸಿದರು.

<><><><>

ಕೋಲಾರ ಜಿಲ್ಲೆಯಲ್ಲಿ ನೂತನವಾಗಿ ಪ್ರಸ್ತಾಪಿಸಲಾಗಿರುವ ರಾಷ್ಟ್ರೀಯ ಹೆದ್ದಾರಿ ಕಾರಿಡಾರ್ ಹಾಗೂ ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್ ವೇ ಸಂಪರ್ಕ ರಸ್ತೆ ಯೋಜನೆಗಳ ಅಂತಿಮ ಜೋಡಣೆ ಸಂದರ್ಭದಲ್ಲಿ ಕೋಲಾರ ಜಿಲ್ಲೆಯ ರೈತರ ಹಿತರಕ್ಷಣೆಯಿಂದ ಸೇವಾ ರಸ್ತೆಗಳನ್ನು ಸಂಪರ್ಕ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೂಚಿಸಿದರು. ಈ ಕುರಿತಾದ ಉನ್ನತ ಮಟ್ಟದ ಮಧ್ಯಸ್ಥಗಾರರ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಅವರು, ಯೋಜನೆಗಳ ಅನುಷ್ಠಾನದ ವೇಳೆ ಪರಿಸರ ಸೂಕ್ಷ್ಮ ವಲಯಗಳ ಸಂರಕ್ಷಣೆ ಮತ್ತು ಕೃಷಿಕರ ಹಿತರಕ್ಷಣೆಗೆ ಮೊದಲ ಆದ್ಯತೆ ನೀಡಲು ಸೂಚಿಸಿದರು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವತಿಯಿಂದ ಭಾರಿ ವಾಹನ ದಟ್ಟಣೆ ನಿಯಂತ್ರಣಕ್ಕಾಗಿ ಪ್ರಸ್ತಾಪಿಸಲಾಗಿರುವ ಕುಪ್ಪಂ ಕಾರಿಡಾರ್ ಯೋಜನೆ ಈ ಹಿಂದೆ ಯೋಜಿಸಲಾಗಿದ್ದ ಮಾರ್ಗವು ಕಾಮಸಮುದ್ರಂ ವನ್ಯಜೀವಿ ಧಾಮದ ಪರಿಸರ ಸೂಕ್ಷ್ಮ ವಲಯದ ಮೂಲಕ ಹಾದುಹೋಗುತ್ತಿತ್ತು. ಇದರಿಂದಾಗಿ ಉಂಟಾಗಬಹುದಾದ ಕಾನೂನು ತೊಡಕುಗಳು ಹಾಗೂ ಅರಣ್ಯನಾಶ ತಪ್ಪಿಸಲು ನೂತನ ನಕ್ಷೆಗಳನ್ನು ಪರಿಶೀಲಿಸಲು ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

<><><><>

ಐಟಿಎಫ್‌ಡಬ್ಲ್ಯು ೩೫ ತುಮಕೂರು ಓಪನ್ ಟನಿಸ್ ಟೂರ್ನಿಯ ಮೊದಲ ಸುತ್ತಿನಲ್ಲಿ ಭಾರತೀಯ ಆಟಗಾರ್ತಿಯರು ಸಿಂಗಲ್ಸ್ ಮತ್ತು ಡಬಲ್ಸ್ ಎರಡರಲ್ಲೂ ಮುನ್ನಡೆ ಸಾಧಿಸಿದ್ದಾರೆ. ಭಾರತದ ಸವಾಲನ್ನು ಮುನ್ನಡೆಸಿದ ಮಧುರಿಮಾ ಸಾವಂತ್, ಮೂರು ಸೆಟ್‌ಗಳ ಹೋರಾಟದಲ್ಲಿ ಗೆದ್ದು ಬೀಗಿದರು. ಸಾವಂತ್ ಅವರು ೬-೨, ೩-೬, ೬-೧ ಸೆಟ್‌ಗಳಿಂದ ಮಾರಿಯಾ ಮಿಖೈಲೋವಾ ಅವರನ್ನು ಸೋಲಿಸಿ ೧೬ರ ಸುತ್ತಿಗೆ ಮುನ್ನಡೆದರು. ಮತ್ತೊಂದು ಅಖಿಲ ಭಾರತ ಪಂದ್ಯದಲ್ಲಿ ಸಂದೀಪ್ತಿ ಸಿಂಗ್ ರಾವ್ ೬-೩, ೬-೪ ಸೆಟ್‌ಗಳಿಂದ ಯಶಸ್ವಿನಿ ಪನ್ವಾರ್ ಅವರನ್ನು ಮಣಿಸಿದರು. ಪೂಜಾ ಇಂಗಳೆ ಕೂಡ ಮೂರು ಸೆಟ್‌ಗಳ ಕಠಿಣ ಪಂದ್ಯದಲ್ಲಿ ಡ್ಯಾನಿಕಾ ಫರ್ನಾಂಡೊ ಅವರನ್ನು ೭-೫, ೧-೬, ೬-೪ ಸೆಟ್‌ಗಳಿಂದ ಮಣಿಸಿದರು. ಮತ್ತೊಂದು ಪಂದ್ಯದಲ್ಲಿ ಸೋನಾಲ್ ಪಾಟೀಲ್ ೬-೦, ೬-೩ ಸೆಟ್‌ಗಳಿಂದ ಅರ್ಹತಾ ಆಟಗಾರ್ತಿ ಸ್ನಿಗ್ಧಾ ಕಾಂತಾ ಅವರನ್ನು ಮಣಿಸಿ ೧೬ ರ ಘಟ್ಟಕ್ಕೆ ಪ್ರವೇಶಿಸಿದರು. ಕ್ಸೆನಿಯಾ ಲಸ್ಕುಟೋವಾ ೬-೩, ೭-೬ ಸೆಟ್‌ಗಳಿಂದ ಏಳನೇ ಶ್ರೇಯಾಂಕಿತ ಮಿಚಿಕಾ ಒಜೆಕಿ ವಿರುದ್ಧ ಗೆಲುವು ಸಾಧಿಸಿದರೆ, ಐದನೇ ಶ್ರೇಯಾಂಕಿತ ಎಲಿನಾ ನೆಪ್ಲಿ ೬-೪, ೬-೧ ಸೆಟ್‌ಗಳಿಂದ ಹರ್ಷಿಣಿ ಎನ್. ನಾಗರಾಜ್ ಅವರನ್ನು ಮಣಿಸಿದರು. ಮಹಿಳಾ ಡಬಲ್ಸ್ ರೌಂಡ್ ಆಫ್ ೧೬ ರಲ್ಲಿ ಭಾರತದ ಅಗ್ರ ಶ್ರೇಯಾಂಕಿತ ವೈದೇಹಿ ಚೌಧರಿ ಮತ್ತು ಜುಝಾನ್ನಾ ಪಾವ್ಲಿಕೋವ್ಸ್ಕಾ ಜೋಡಿ ೬-೧, ೬-೨ ಸೆಟ್‌ಗಳಿಂದ ಮಾರಿಯಾ ಮಿಖೈಲೋವಾ ಮತ್ತು ಸಂದೀಪ್ತಿ ಸಿಂಗ್ ರಾವ್ ಅವರನ್ನು ಸೋಲಿಸಿತು. ಟೂರ್ನಿಯಲ್ಲಿ ೯ ದೇಶಗಳ ಟೆನಿಸ್ ಕ್ರೀಡಾಪಟುಗಳು ಭಾಗವಹಿಸಿದ್ದು, ಕ್ರೀಡಾಕೂಟದಲ್ಲಿ ಚಾಂಪಿಯನ್ ಆದವರಿಗೆ ೨೮ ಲಕ್ಷ ರೂಪಾಯಿ ಬಹುಮಾನ ನೀಡಲಾಗುವುದು. ಇದೇ ೧೦ರಂದು ಅಂತಿಮ ಪಂದ್ಯ ನಡೆಯಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>